RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| | | |
|---|---|---|
| ಭಾಗ - IV-A<br>Part - IV-A | ಬೆಂಗಳೂರು, ಶುಕ್ರವಾರ, ಫೆಬ್ರವರಿ ೨೮, ೨೦೧೪ (ಫಾಲ್ಗುಣ ೯, ಶಕ ವರ್ಷ ೧೯೩೫)<br>Bangalore, Friday, February 28, 2014 (Phalguna 9, Shaka Varsha 1935) | ನಂ. ೧೮೧<br>No. 181 |


## ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಸಚಿವಾಲಯ

### ಅಧಿಸೂಚನೆ

**ಸಂಖ್ಯೆ: ಸಂವ್ಯಶಾಇ 12 ಶಾಸನ 2014, ಬೆಂಗಳೂರು, ದಿನಾಂಕ: 28.02.2014**

ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ತಿದ್ದುಪಡಿ) ವಿಧೇಯಕ, 2014ಕ್ಕೆ 2014ರ ಫೆಬ್ರವರಿ ತಿಂಗಳ ಇಪ್ಪತ್ತೆಂಟನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2014ರ ಕರ್ನಾಟಕ ಅಧಿನಿಯಮ ಸಂಖ್ಯೆ:15 ಎಂಬುದಾಗಿ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2014ರ ಕರ್ನಾಟಕ ಅಧಿನಿಯಮ ಸಂಖ್ಯೆ 15**

(2014ರ ಫೆಬ್ರವರಿ ಇಪ್ಪತ್ತೆಂಟನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ತಿದ್ದುಪಡಿ) ಅಧಿನಿಯಮ, 2014**

(2014ರ ಫೆಬ್ರವರಿ ಇಪ್ಪತ್ತೆಂಟನೇ ದಿನಾಂಕದಂದು ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)

ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮ, 2003ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮ, 2003ನ್ನು (2004ರ ಕರ್ನಾಟಕ ಅಧಿನಿಯಮ 32) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತೈದನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗತಕ್ಕದ್ದು:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ತಿದ್ದುಪಡಿ) ಅಧಿನಿಯಮ, 2014 ಎಂದು ಕರೆಯತಕ್ಕದ್ದು.

(2) ಇದು 2014ರ ಮಾರ್ಚ್ ಒಂದನೇ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**2. 22ನೇ ಪ್ರಕರಣದ ತಿದ್ದುಪಡಿ.-** ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮ, 2003ರ (2004ರ ಕರ್ನಾಟಕ ಅಧಿನಿಯಮ 32) (ಇಲ್ಲಿ ಇನ್ನು ಮುಂದೆ ಮೂಲ ಅಧಿನಿಯಮವೆಂದು ಉಲ್ಲೇಖಿಸಲಾಗಿದೆ) 22ನೇ ಪ್ರಕರಣದಲ್ಲಿ,-